## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 721

ಸದಸ್ಯರ ಹೆಸರು : ಶ್ರೀ ಹೆಚ್.ಎಸ್. ಗೋಪಿನಾಥ್

ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸುವ ದಿನಾಂಕ : 12-03-2025

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿ ಶಕ್ತಿ ಯೋಜನೆ ಪ್ರಾರಂಭವಾದ ದಿನದಿಂದ ಇದುವರೆಗೂ ನಾಲ್ಕು ಸಾರಿಗೆ ಸಂಸ್ಥೆಗಳಿಂದ ಪ್ರಯಾಣ ಮಾಡಿರುವ ಮಹಿಳಾ ಪ್ರಯಾಣಿಕರ ಸಂಖ್ಯೆ ಎಷ್ಟು; | ರಾಜ್ಯ ನಾಲ್ಕು ಸಾರಿಗೆ ನಿಗಮ/ಸಂಸ್ಥೆಗಳಲ್ಲಿ ಶಕ್ತಿ ಯೋಜನೆ ಜಾರಿಯಾದ ದಿನಾಂಕ:11.06.2023 ರಿಂದ 28.02.2025ರವರೆಗೆ ಸಾರಿಗೆ ಬಸ್ಸುಗಳಲ್ಲಿ ಪ್ರಯಾಣಿಸಿರುವ ಮಹಿಳಾ ಪ್ರಯಾಣಿಕರ ಸಂಖ್ಯೆ ಕೆಳಕಂಡಂತಿದೆ:-<br>**(ಕೋಟಿಗಳಲ್ಲಿ)**<br>**ನಿಗಮ/ಸಂಸ್ಥೆ** – **ಸಂಖ್ಯೆ**<br>ಕ.ರಾ.ರ.ಸಾ.ನಿಗಮ – 125.54<br>ಬೆಂ.ಮ.ಸಾ.ಸಂಸ್ಥೆ – 128.34<br>ವಾ.ಕ.ರ.ಸಾ.ಸಂಸ್ಥೆ – 93.71<br>ಕ.ಕ.ರ.ಸಾ.ನಿಗಮ – 58.68<br>**ಒಟ್ಟು** – **406.27** |
| ಆ. | ಮಹಿಳೆಯರ ಟಿಕೆಟ್ ಮೊತ್ತವನ್ನು ರಾಜ್ಯ ಸರ್ಕಾರವು ಬಿ.ಎಂ.ಟಿ.ಸಿಗೆ ಪೂರ್ಣ ಪ್ರಮಾಣದಲ್ಲಿ ಪಾವತಿಸದೇ ಕೋಟ್ಯಾಂತರ ರೂ ಬಾಕಿ ಉಳಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಗೆ ಶಕ್ತಿ ಯೋಜನೆ ಜಾರಿಯಾದ ದಿನಾಂಕ:11.06.2023ರಿಂದ ದಿನಾಂಕ:28.02.2025ರವರೆಗೆ ರೂ.134220.24 ಲಕ್ಷಗಳನ್ನು ಬಿಡುಗಡೆಗೊಳಿಸಿದ್ದು ರೂ.36762.93 ಲಕ್ಷಗಳಷ್ಟೇ ನೀಡುವುದು ಬಾಕಿ ಇರುತ್ತದೆ.<br>**ಪ್ರಸ್ತುತ ಶಕ್ತಿ ಯೋಜನೆಯ ಮೊತ್ತವನ್ನು ಒಂದು ತಿಂಗಳ ಮುಂಚಿತವಾಗಿಯೇ ಸಂಸ್ಥೆಗೆ ಬಿಡುಗಡೆ ಮಾಡಲಾಗುತ್ತಿದೆ.**<br>• ರಾಜ್ಯದ ನಾಲ್ಕು ರಸ್ತೆ ಸಾರಿಗೆ ಸಂಸ್ಥೆಗಳಲ್ಲಿ ದಿನಾಂಕ:31.03.2023ರವರೆಗೆ ಒಟ್ಟು ರೂ.4099.38 ಕೋಟಿಗಳ ಹೊಣೆಗಾರಿಕೆ ಬಾಕಿಯಿದ್ದು (ಸಾಲದ ಬಾಕಿ ಹೊಣೆಗಾರಿಕೆ ಒಳಗೊಂಡಂತೆ), ಸದರಿ ಬಾಕಿಯು ನಿಗಮಗಳ ತೀವ್ರ ಆರ್ಥಿಕ ಹಿನ್ನೆಡೆಗೆ ಕಾರಣವಾಗಿತ್ತು. ನಿಗಮಗಳು ಇಂಧನ ಕಂಪನಿಗಳಿಗೆ ಇಂಧನದ ವೆಚ್ಚವನ್ನು, ಭವಿಷ್ಯ ನಿಧಿ ಮತ್ತು |
| ಇ. | ಹಾಗಿದ್ದಲ್ಲಿ, ಎಷ್ಟು ಬಾಕಿ ಉಳಿಸಿಕೊಂಡಿದೆ ಹಾಗೂ ಬಾಕಿ ಉಳಿಸಿಕೊಳ್ಳಲು ಇರುವ ಕಾರಣಗಳೇನು; | |
| ಈ. | ಸರ್ಕಾರವು ಈವರೆಗೆ ಬಾಕಿ ಮರುಪಾವತಿಸದಿರುವುದರಿಂದ ಸಂಸ್ಥೆಯ ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಉ. | ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಸರಬರಾಜುದಾರರ/ ಇತರೆ ಬಿಲ್ಲುಗಳನ್ನು ಪಾವತಿಸದೇ ಬಾಕಿಯಿರಿಸಿದ್ದರಿಂದ ನಿಗಮಗಳ ಮೇಲೆ ಆರ್ಥಿಕ ಹೊರೆ ಹೆಚ್ಚಾಗಿತ್ತು.<br>• ಅಲ್ಲದೇ ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳ ಅಧಿಕಾರಿ/ನೌಕರರಿಗೆ ಕೈಗಾರಿಕಾ ಒಪ್ಪಂದದನ್ವಯ ಪ್ರತಿ ನಾಲ್ಕು ವರ್ಷಗಳಿಗೊಮ್ಮೆ ಒಪ್ಪಂದವನ್ನು (ಅಗ್ರಿಮೆಂಟ್) ಪರಿಷ್ಕರಿಸಬೇಕಾಗಿದ್ದು, ಅದರಂತೆ ವೇತನವನ್ನು 2020ನೇ ವರ್ಷದಲ್ಲಿ ಪರಿಷ್ಕರಣೆ ಮಾಡಬೇಕಾಗಿತ್ತು, ಆದರೆ ಮೂಲವೇತನವನ್ನು ಶೇ.15ರಷ್ಟು ಹೆಚ್ಚಿಸಿ ಅದರಂತೆ ವೇತನ ಶ್ರೇಣಿಗಳನ್ನು ಪರಿಷ್ಕರಿಸಿ ದಿನಾಂಕ:01.03.2023ರಿಂದ ಜಾರಿಗೊಳಿಸಲಾಗಿದೆ. **ಸದರಿ ಪರಿಷ್ಕೃತ ವೇತನ ಶ್ರೇಣಿಯಲ್ಲಿ ಅಧಿಕಾರಿ/ನೌಕರರಿಗೆ ವೇತನವನ್ನು ಪಾವತಿಸಲು ಆಯವ್ಯಯದಲ್ಲಿ ಯಾವುದೇ ಅನುದಾನವನ್ನು ಮೀಸಲಿರಿಸಿರಲಿಲ್ಲ ಹಾಗೂ ನಿಗಮಗಳಿಗೆ ಅನುದಾನ ಬಿಡುಗಡೆ ಮಾಡಿರಲಿಲ್ಲ.**<br><br>ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯನ್ನು ಆರ್ಥಿಕವಾಗಿ ಪ್ರಬಲಗೊಳಿಸಲು ಕೈಗೊಂಡಿರುವ ಕ್ರಮಗಳು ಕೆಳಕಂಡಂತಿದೆ:-<br><br>• ಡೀಸೆಲ್ ತೈಲ ಬೆಲೆ ಹೆಚ್ಚಳದೊಂದಿಗೆ ಸಿಬ್ಬಂದಿ ವೆಚ್ಚ, ವಾಹನ ಬಿಡಿ ಭಾಗಗಳ ವೆಚ್ಚ ಒಳಗೊಂಡಂತೆ ಒಟ್ಟು ಕಾರ್ಯಾಚರಣೆ ವೆಚ್ಚ ಹೆಚ್ಚಾಗಿ ನಿಗಮಕ್ಕೆ ಹೆಚ್ಚಿನ ಆರ್ಥಿಕ ಹೊರೆಯುಂಟಾಗಿದ್ದ ಕಾರಣ ದಿನಾಂಕ 04/05-01-2025 ರಿಂದ ಜಾರಿಗೆ ಬರುವಂತೆ ಬಸ್ ಪ್ರಯಾಣ ದರವನ್ನು ಶೇಕಡ 15ರಷ್ಟು ಪರಿಷ್ಕರಣೆ ಮಾಡಲಾಗಿದೆ.<br>• ಸಂಸ್ಥೆಗೆ ಹೊಸ ಬಸ್‌ಗಳ ಖರೀದಿಗಾಗಿ 2023-24ನೇ ಸಾಲಿನಲ್ಲಿ ನಿಗಮಕ್ಕೆ ರೂ.150.00 ಕೋಟಿಗಳ ವಿಶೇಷ ಬಂಡವಾಳ ಅನುದಾನವನ್ನು ಒದಗಿಸಲಾಗಿದೆ.<br>• ಸಂಸ್ಥೆಯು ನವೆಂಬರ್—24ರ ಅಂತ್ಯಕ್ಕೆ ಬಾಕಿ ಉಳಿಸಿಕೊಂಡಿರುವ ಶಾಸನಬದ್ಧ ಪಾವತಿಯಾದ |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| | | ಭವಿಷ್ಯ ನಿಧಿ ಹಾಗೂ ಇಂಧನದ ಬಾಕಿ ಮೊತ್ತ ಪಾವತಿಸಲು ರೂ.589.20 ಕೋಟಿ ಮೊತ್ತದ ಸಾಲವನ್ನು ಸರ್ಕಾರದ ಖಾತರಿ/ ಗ್ಯಾರಂಟಿಯೊಂದಿಗೆ ಹಣಕಾಸು ಸಂಸ್ಥೆಗಳಿಂದ ಪಡೆಯಲು ಅನುಮೋದನೆ ನೀಡಿದೆ.<br>• ಸಂಸ್ಥೆಗೆ ದಿನಾಂಕ:01.01.2020ರಿಂದ ದಿನಾಂಕ: 28.02.2023ರವರೆಗಿನ ಅವಧಿಯಲ್ಲಿ ಸೇವಾವಿಮುಕ್ತಿ ಹೊಂದಿದ ಅಧಿಕಾರಿ/ ನೌಕರರಿಗೆ ದಿನಾಂಕ:01.01.2020ರ ಪರಿಷ್ಕೃತ ವೇತನ ಶ್ರೇಣಿಯನ್ವಯ ಪಾವತಿಸಬೇಕಾದ ಉಪಧನ ಹಾಗೂ ಗಳಿಕೆ ರಜೆ ನಗದೀಕರಣದ ವ್ಯತ್ಯಾಸ ಮೊತ್ತದ ಪಾವತಿಗಾಗಿ ಒಟ್ಟು ರೂ.50.25 ಕೋಟಿಗಳನ್ನು ಬಿಡುಗಡೆಗೊಳಿಸಿದೆ.<br>• ಸಂಸ್ಥೆಯ ನಗದು ಕೊರತೆಯನ್ನು ನಿಭಾಯಿಸಲು 2023-24ನೇ ಸಾಲಿನಲ್ಲಿ ನಿಗಮಗಳು ಸರ್ಕಾರಕ್ಕೆ ಪಾವತಿ ಮಾಡಬೇಕಾದ ಮೋಟಾರು ವಾಹನ ತೆರಿಗೆ ರೂ.119.88 ಕೋಟಿಗಳ ಪಾವತಿಯಿಂದ ವಿನಾಯಿತಿಯನ್ನು ನೀಡಿರುತ್ತದೆ ಹಾಗೂ 2024-25ನೇ ಸಾಲಿನಲ್ಲಿ ನಿಗಮಗಳು ಸರ್ಕಾರಕ್ಕೆ ಪಾವತಿಸಬೇಕಾದ ಮೋಟಾರು ವಾಹನ ತೆರಿಗೆ ಮೊತ್ತ ರೂ.94.45 ಕೋಟಿಗಳನ್ನು ಪುಸ್ತಕ ಹೊಂದಾಣಿಕೆ ಮಾಡಲು ಅನುಮೋದನೆ ನೀಡಿದೆ.<br>• ಸಂಸ್ಥೆಯ ಆರ್ಥಿಕ ನಷ್ಟವನ್ನು ಪರಿಗಣಿಸಿ, 2023-24ನೇ ಸಾಲಿನಲ್ಲಿ ರೂ.253.29 ಕೋಟಿ ಹಾಗೂ 2024-25ನೇ ಸಾಲಿನಲ್ಲಿ ರೂ.124.89 ಕೋಟಿಗಳ ಧನಸಹಾಯ / ಪರಿಹಾರ ಧನವನ್ನು ನೀಡಲಾಗಿದೆ. ಹೀಗೆ ಸಂಸ್ಥೆಯು ಆರ್ಥಿಕ ಸಂಕಷ್ಟಕ್ಕೆ ಸಿಲುಕದಂತೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ. |

ಸಂಖ್ಯೆ: ಟಿಡಿ 48 ಟಿಸಿಕ್ಯೂ 2025

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಮುಜರಾಯಿ ಸಚಿವರು